ಕರ್ನಾಟಕ ಸರ್ಕಾರ

ಸಂಖ್ಯೆ: ಇಡಿ 12 ಡಿಪಿಐ 2019

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ:25/09/2019

## ಅಧಿಸೂಚನೆ

ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪ ನಿರ್ದೇಶಕರು ಹಾಗೂ ತತ್ಸಮಾನ ವೃಂದದ ಅಧಿಕಾರಿಯಾದ ಶ್ರೀ ಕೆ.ರವಿಶಂಕರ್ ರೆಡ್ಡಿ, ಉಪ ನಿರ್ದೇಶಕರು (ಆಡಳಿತ), ಸಾರ್ವಜನಿಕ ಶಿಕ್ಷಣ ಇಲಾಖೆ, ಮಧುಗಿರಿ ಶೈಕ್ಷಣಿಕ ಜಿಲ್ಲೆ ಇವರನ್ನು ಆಡಳಿತಾತ್ಮಕ ಮತ್ತು ಸಾರ್ವಜನಿಕ ಹಿತದೃಷ್ಟಿಯಿಂದ ಈ ಕೂಡಲೇ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆಗೆ ಉಪ ನಿರ್ದೇಶಕರು (ಆಡಳಿತ), ಸಾರ್ವಜನಿಕ ಶಿಕ್ಷಣ ಇಲಾಖೆ, ಚಿತ್ರದುರ್ಗ ಜಿಲ್ಲೆ ಇಲ್ಲಿನ ಖಾಲಿ ಹುದ್ದೆಗೆ ವರ್ಗಾಯಿಸಿ ಆದೇಶಿಸಿದೆ.

ಹಾಗೂ ಸಾರ್ವಜನಿಕ ಶಿಕ್ಷಣ ಇಲಾಖೆಯ ಶಿಕ್ಷಣಾಧಿಕಾರಿ ಹಾಗೂ ತತ್ಸಮಾನ ವೃಂದದ ಪ್ರಸ್ತುತ ಸ್ಥಳ ನಿರೀಕ್ಷಣೆಯಲ್ಲಿರುವ ಅಧಿಕಾರಿಯಾದ ಶ್ರೀ ಬಿ.ಸಿದ್ದಪ್ಪ ಇವರನ್ನು ಆಡಳಿತಾತ್ಮಕ ಮತ್ತು ಸಾರ್ವಜನಿಕ ಹಿತದೃಷ್ಟಿಯಿಂದ ಈ ಕೂಡಲೇ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆಗೆ ಕ್ಷೇತ್ರ ಶಿಕ್ಷಣಾಧಿಕಾರಿ, ಚಿತ್ರದುರ್ಗ ತಾಲ್ಲೂಕು, ಚಿತ್ರದುರ್ಗ ಜಿಲ್ಲೆ ಇಲ್ಲಿನ ಶ್ರೀ ನಾಗಭೂಷಣ ಇವರ ಜಾಗಕ್ಕೆ ವರ್ಗಾಯಿಸಿ ಆದೇಶಿಸಿದೆ.

ಮುಂದುವರೆದು ಶ್ರೀ ನಾಗಭೂಷಣ, ಕ್ಷೇತ್ರ ಶಿಕ್ಷಣಾಧಿಕಾರಿ, ಚಿತ್ರದುರ್ಗ ತಾಲ್ಲೂಕು, ಚಿತ್ರದುರ್ಗ ಜಿಲ್ಲೆ ಇವರಿಗೆ ಪ್ರತ್ಯೇಕವಾಗಿ ಸ್ಥಳನಿಯುಕ್ತಿಗೊಳಿಸಲಾಗುವುದು. ಈ ಸಂಬಂಧ ಸರ್ಕಾರದಲ್ಲಿ ವರದಿ ಮಾಡಿಕೊಳ್ಳುವಂತೆ ಸೂಚಿಸಿದೆ. ವರ್ಗಾವಣೆಗೊಳಿಸಿದ ಅಧಿಕಾರಿಗಳು ಕೂಡಲೇ ವರ್ಗಾಯಿಸಿದ ಜಾಗಕ್ಕೆ ಹಾಜರಾದ ಬಗ್ಗೆ ಸರ್ಕಾರವನ್ನೊಳಗೊಂಡಂತೆ ಸಂಬಂಧಿಸಿವರೆಲ್ಲರಿಗೂ ಪ್ರಭಾರ ವರ್ಗಾವಣೆ ಪ್ರಪತ್ರವನ್ನು ಸಲ್ಲಿಸುವಂತೆ ತಿಳಿಸಿದೆ.

**" ಮಾನ್ಯ ಮುಖ್ಯಮಂತ್ರಿಯವರಿಂದ ಅನುಮೋದಿಸಲ್ಪಟ್ಟಿದೆ "**

**ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,**

(ಟಿ.ಡಿ.ನಾಗೇಂದ್ರ)
ಸರ್ಕಾರದ ಅಧೀನ ಕಾರ್ಯದರ್ಶಿ
ಶಿಕ್ಷಣ ಇಲಾಖೆ(ಆಡಳಿತ).

**ಇವರಿಗೆ:**

1. ಪ್ರಧಾನ ಮಹಾಲೇಖಪಾಲರು (ಎ ಮತ್ತು ಇ) ಕರ್ನಾಟಕ, ಬೆಂಗಳೂರು.
2. ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು.
3. ಉಪನಿರ್ದೇಶಕರು(ಆಡಳಿತ), ಸಾರ್ವಜನಿಕ ಶಿಕ್ಷಣ ಇಲಾಖೆ, ಮಧುಗಿರಿ ಶೈಕ್ಷಣಿಕ ಜಿಲ್ಲೆ / ಚಿತ್ರದುರ್ಗ ಜಿಲ್ಲೆ.
4. ಸಂಬಂಧಪಟ್ಟ ಅಧಿಕಾರಿಗಳಿಗೆ.
5. ಮಾಹಿತಿ ಕೇಂದ್ರ/ ಶಾಖಾ ರಕ್ಷಾ ಕಡತ /ಹೆಚ್ಚಿನ ಪ್ರತಿಗಳು.

**ಪ್ರತಿ ಮಾಹಿತಿಗಾಗಿ:-**

1. ಮಾನ್ಯ ಮುಖ್ಯ ಮಂತ್ರಿಗಳ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
2. ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.